ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ನೇವಿ-1/ಅಉಆ/90/2023-24

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-01.
ದಿನಾಂಕ:13.09.2023

## ಪ್ರಕಟಣೆ

**ವಿಷಯ: 2023-24ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರ ಆಯ್ಕೆ ಬಗ್ಗೆ.**

*******

2023-24ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆ ಮೂಲಕ ಆಯ್ಕೆ ಮಾಡಿಕೊಳ್ಳುವ ಸಂಬಂಧ ಆಯ್ಕೆ ಪ್ರಕ್ರಿಯೆ ಕುರಿತು ತಾತ್ಕಾಲಿಕ ವೇಳಾಪಟ್ಟಿಯೊಂದಿಗೆ ಇದೇ ಸಮಸಂಖ್ಯೆಯ ದಿನಾಂಕ:24.08.2023 ರಲ್ಲಿ ಪ್ರಕಟಣೆ ಹೊರಡಿಸಲಾಗಿತ್ತು.

ಸರ್ಕಾರದ ಪತ್ರ ಸಂಖ್ಯೆ: ಇಡಿ 171 ಡಿಸಿಇ 2023 (ಇ), ದಿನಾಂಕ:13.09.2023 ರಲ್ಲಿ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013 ರನ್ವಯ ತಾತ್ಕಾಲಿಕವಾಗಿ ತುಂಬುವ ಹುದ್ದೆಗಳಿಗೂ ಸಹ ಅನುಚ್ಛೇದ 371ಜೆ ಮೀಸಲಾತಿಯನ್ನು ಅನ್ವಯಿಸಿ, ಸ್ಥಳೀಯ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಸೂಚಿಸಲಾಗಿರುತ್ತದೆ. ಸರ್ಕಾರದ ನಿರ್ದೇಶನದಂತೆ ಕ್ರಮವಹಿಸುವ ಸಂಬಂದ ದಿನಾಂಕ:24.08.2023 ರಂದು ಹೊರಡಿಸಲಾಗಿರುವ ಪ್ರಕಟಣೆಯಲ್ಲಿನ ತಾತ್ಕಾಲಿಕ ವೇಳಾಪಟ್ಟಿಯನ್ನು ಈ ಕೆಳಕಂಡಂತೆ ಪರಿಷ್ಕರಿಸಲಾಗಿದೆ.

| ಕ್ರ.ಸಂ. | ವಿವರ | ದಿನಾಂಕ |
|---|---|---|
| 1. | ಈಗಾಗಲೇ ಆನ್‌ಲೈನ್ ಮೂಲಕ ಸಲ್ಲಿಸಿರುವ ಅರ್ಜಿಯ ತಿದ್ದುಪಡಿ (Edit) ಮಾಡಲು ಹಾಗೂ ಹೊಸದಾಗಿ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ | 13.09.2023 |
| 2. | ಕೊನೆಯ ದಿನಾಂಕ | 17.09.2023 |
| 3. | ರಾಜ್ಯವ್ಯಾಪಿ ಮೆರಿಟ್ ಪಟ್ಟಿ ಪ್ರಕಟಿಸುವ ದಿನಾಂಕ | 19.09.2023 |
| 4. | ತಾತ್ಕಾಲಿಕ ಕಾರ್ಯಭಾರ ಹಾಗೂ ಕೌನ್ಸಲಿಂಗ್‌ಗಾಗಿ ಅಭ್ಯರ್ಥಿಗಳ ಪಟ್ಟಿ ಪ್ರಕಟಿಸುವ ದಿನಾಂಕ | 21.09.2023 |
| 5. | ಮೆರಿಟ್ ಪಟ್ಟಿಯನ್ವಯ ಕಾಲೇಜು ಆಯ್ಕೆ ಕೌನ್ಸಿಲಿಂಗ್ ನಡೆಸುವ ದಿನಾಂಕಗಳು | 22.09.2023 ರಿಂದ 30.09.2023 |
| 6. | ಕೌನ್ಸಿಲಿಂಗ್‌ನಲ್ಲಿ ಕಾಲೇಜು ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳ ಪಟ್ಟಿ ಪ್ರಕಟಿಸುವ ದಿನಾಂಕ | 03.10.2023 |
| **ಆನ್‌ಲೈನ್ ಅರ್ಜಿ ಸಲ್ಲಿಸಲು ಇಲಾಖೆಯ ಅಂತರ್ಜಾಲ ತಾಣ dce.karnataka.gov.in ಅನ್ನು ಸಂಪರ್ಕಿಸುವುದು.** | | |

1. ಕಲ್ಯಾಣ ಕರ್ನಾಟಕ (ಹೈದ್ರಾಬಾದ್-ಕರ್ನಾಟಕ) ಪ್ರದೇಶಕ್ಕೆ (ಕಲಬುರಗಿ, ಬೀದರ್, ರಾಯಚೂರು, ಕೊಪ್ಪಳ, ಬಳ್ಳಾರಿ, ವಿಜಯನಗರ & ಯಾದಗಿರಿ ಜಿಲ್ಲೆ) ಒಳಪಡುವ ಅಭ್ಯರ್ಥಿಗಳು ಈಗಾಗಲೇ ಅರ್ಜಿ ಸಲ್ಲಿಸಿದ್ದಲ್ಲಿ, ಅಂತಹ ಅಭ್ಯರ್ಥಿಗಳು ಕಲ್ಯಾಣ ಕರ್ನಾಟಕ ಪ್ರದೇಶದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 371ಜೆ ಮೀಸಲಾತಿಯನ್ವಯ ಆಯ್ಕೆಗೊಂಡು ಸೇವೆ ಸಲ್ಲಿಸಲು ಇಚ್ಛಿಸಿದಲ್ಲಿ ಕೋರಿಕೆಯನ್ನು ಆನ್‌ಲೈನ್ ಅರ್ಜಿಯಲ್ಲಿ ದಿನಾಂಕ:17.09.2023 ರವರೆಗೆ ತಿದ್ದುಪಡಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

...... 2

2. ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಸೇವೆ ಸಲ್ಲಿಸಲು ಕೋರಿಕೆ ಸಲ್ಲಿಸುವ ಅಭ್ಯರ್ಥಿಗಳು ಕಲ್ಯಾಣ ಕರ್ನಾಟಕ ಪ್ರದೇಶ ವ್ಯಾಪ್ತಿಗೆ ಒಳಪಡುವ ಬಗ್ಗೆ ಸಕ್ಷಮ ಪ್ರಾಧಿಕಾರದಿಂದ 371ಜೆ ಆದೇಶದನ್ವಯ ನಿಗಧಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಳ್ಳುವುದು ಕಡ್ಡಾಯವಾಗಿರುತ್ತದೆ. ಆಯ್ಕೆಯಾದ ಅಭ್ಯರ್ಥಿಗಳು ಸದರಿ ಪ್ರಮಾಣ ಪತ್ರವನ್ನು ಕಾಲೇಜಿನಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವ ಸಂದರ್ಭದಲ್ಲಿ ಕಡ್ಡಾಯವಾಗಿ ಪ್ರಾಂಶುಪಾಲರಿಗೆ ಸಲ್ಲಿಸಬೇಕಾಗಿರುತ್ತದೆ.

3. ಆನ್‌ಲೈನ್ ಅರ್ಜಿಯಲ್ಲಿ ಕಲ್ಯಾಣ ಕರ್ನಾಟಕ ಮೀಸಲಾತಿ ಕೋರಿಕೆ ಸಲ್ಲಿಸಿ, ಅದರನ್ವಯ ಆಯ್ಕೆಗೊಂಡು ಸಂಬಂಧಪಟ್ಟ ಕಾಲೇಜಿನಲ್ಲಿ ಕರ್ತವ್ಯಕ್ಕೆ ಹಾಜರಾಗುವ ಸಂದರ್ಭದಲ್ಲಿ ಕಲ್ಯಾಣ ಕರ್ನಾಟಕ ಮೀಸಲಾತಿ ಪ್ರಮಾಣ ಪತ್ರವನ್ನು ಪ್ರಾಂಶುಪಾಲರ ಸಮಕ್ಷಮ ಹಾಜರುಪಡಿಸಲು ವಿಫಲರಾದಲ್ಲಿ ಅಥವಾ ಹಾಜರುಪಡಿಸಿದ ಪ್ರಮಾಣ ಪತ್ರವು ತಿರಸ್ಕೃತಗೊಂಡಲ್ಲಿ ಅಂತಹ ಅಭ್ಯರ್ಥಿಗಳನ್ನು ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯಿಂದಲೇ ಅನರ್ಹಗೊಳಿಸಲಾಗುವುದು.

4. ಈಗಾಗಲೇ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ತಪ್ಪು ಮಾಹಿತಿ ನೀಡಿದಲ್ಲಿ ಅದನ್ನು ಸರಿಪಡಿಸಿಕೊಳ್ಳಲು/ತಿದ್ದುಪಡಿ ಮಾಡಿಕೊಳ್ಳಲು ದಿನಾಂಕ:17.09.2023 ರವರೆಗೆ ಅವಕಾಶವಿರುತ್ತದೆ ಹಾಗೂ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಲು ಇಚ್ಛೆ ಇದ್ದು, ಇದುವರೆವಿಗೂ ಅರ್ಜಿ ಸಲ್ಲಿಸದೇ ಇರುವಂತಹ ಅರ್ಹ ಅಭ್ಯರ್ಥಿಗಳು ಸಹ ಆನ್‌ಲೈನ್ ಮೂಲಕ ಹೊಸದಾಗಿ ಅರ್ಜಿಯನ್ನು ದಿನಾಂಕ:17.09.2023 ರೊಳಗಾಗಿ ಸಲ್ಲಿಸಲು ಅವಕಾಶ ನೀಡಲಾಗಿದೆ.

5. ಉಳಿದಂತೆ ದಿನಾಂಕ:24.08.2023 ರ ಸಮಸಂಖ್ಯೆಯ ಪ್ರಕಟಣೆಯಲ್ಲಿ ನಿಗದಿಪಡಿಸಲಾಗಿರುವ ಎಲ್ಲಾ ಮಾನದಂಡಗಳು ಯಥಾವತ್ತಾಗಿ ಮುಂದುವರೆಯುತ್ತವೆ.

(ಮಾನ್ಯ ಆಯುಕ್ತರ ಆದೇಶದ ಮೇರೆಗೆ)

ಮುಖ್ಯ ಆಡಳಿತಾಧಿಕಾರಿ
ಕಾಲೇಜು ಶಿಕ್ಷಣ ಇಲಾಖೆ

<u>ಇವರಿಗೆ,</u>

1) ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು. – ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.
4) ಕಛೇರಿ ಪ್ರತಿ.